**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 378 ಗ್ರಾಪಂಅ 2020 (ಭಾಗ–2)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:03–06–2020.

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
ಬೆಂಗಳೂರು.

**ಇವರಿಗೆ:**

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳು.

ಮಾನ್ಯರೆ,

ವಿಷಯ: ಅವಧಿ ಪೂರ್ಣಗೊಂಡಿರುವ ಗ್ರಾಮ ಪಂಚಾಯತಿಗಳು ಸಭೆಗಳು ಮತ್ತು ಹಣಕಾಸಿನ ವ್ಯವಹಾರವನ್ನು ನಡೆಸದಿರುವ ಬಗ್ಗೆ.

****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 41 ರಂತೆ ಗ್ರಾಮ ಪಂಚಾಯತಿ ಸದಸ್ಯರ ಅವಧಿಯು 5 ವರ್ಷಗಳಿಗೆ ನಿಗಧಿಪಡಿಸಿದ್ದು, ಪ್ರಕರಣ 42 ರಲ್ಲಿ ಗ್ರಾಮ ಪಂಚಾಯತಿ ಸದಸ್ಯರ ಹುದ್ದೆಯ ಅವಧಿಯು ಗ್ರಾಮ ಪಂಚಾಯತಿಯ ಪ್ರಥಮ ಸಭೆಗೆ ಗೊತ್ತುಪಡಿಸಿದ ದಿನಾಂಕದಿಂದ ಪ್ರಾರಂಭವಾಗಿ 5 ವರ್ಷಗಳ ಅವಧಿಯವರೆಗೆ ಇರುತ್ತದೆ. ಪ್ರಸ್ತುತ ಕೆಲವು ಗ್ರಾಮ ಪಂಚಾಯತಿಗಳ ಅವಧಿ ಪೂರ್ಣಗೊಂಡಿದ್ದು, ಅವಧಿ ಪೂರ್ಣಗೊಂಡಿರುವ ಗ್ರಾಮ ಪಂಚಾಯತಿಗಳು ಸರ್ಕಾರದ ಮುಂದಿನ ನಿರ್ದೇಶನದವರೆಗೆ ಯಾವುದೇ ಸಭೆಗಳು ಮತ್ತು ಹಣಕಾಸಿನ ವ್ಯವಹಾರವನ್ನು ಮಾಡಬಾರದೆಂದು ಕ್ರಮ ಕೈಗೊಳ್ಳುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ನಂಬುಗೆಯ,

B. Naveenkumar 03/06/2020.
**(ಬಿ. ನವೀನ್ ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ, (ಗ್ರಾ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
03/06/2020

**ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.**

1) ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
2) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.